# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | **564 (746)** |
| **ಸದಸ್ಯರ ಹೆಸರು** | **ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ)** |
| **ಉತ್ತರಿಸಬೇಕಾದ ದಿನಾಂಕ** | **11-12-2023** |
| **ಉತ್ತರಿಸಬೇಕಾದ ಸಚಿವರು** | **ಉನ್ನತ ಶಿಕ್ಷಣ ಸಚಿವರು** |

| | **ಪ್ರಶ್ನೆ** | **ಉತ್ತರ** |
|---|---|---|
| ಅ) | ಸರ್ಕಾರಿ ಪದವಿ ಕಾಲೇಜು ಹಾಗೂ ವಿಶ್ವವಿದ್ಯಾನಿಲಯಗಳಲ್ಲಿ ಅತಿಥಿ ಉಪನ್ಯಾಸಕರಾಗಿ ದೀರ್ಘ ಕಾಲದಿಂದ ಕಾರ್ಯ ನಿರ್ವಹಿಸುತ್ತಿರುವವರಿಗೆ ಸೇವಾ ಭದ್ರತೆ ನೀಡದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿರುತ್ತದೆ. |
| ಆ) | ಸದರಿಯವರಿಗೆ ಯಾವುದೇ ರೀತಿಯ ರಜೆ ಸೌಲಭ್ಯ ಇಲ್ಲದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿರುತ್ತದೆ. |
| ಇ) | ಸದರಿಯವರ ಶೈಕ್ಷಣಿಕ ವರ್ಷದ ನೇಮಕಾತಿಯನ್ನು 10 ತಿಂಗಳ ಬದಲು 12 ತಿಂಗಳ ಅವಧಿಗೆ ನೇಮಕ ಮಾಡಲು ಇರುವ ತೊಂದರೆಗಳೇನು; | ವಿಶ್ವವಿದ್ಯಾಲಯಗಳ ಶೈಕ್ಷಣಿಕ ವೇಳಾ ಪಟ್ಟಿಯನ್ವಯ ಆಯಾ ಸಾಲಿನಲ್ಲಿ/ವರ್ಷದಲ್ಲಿ 10 ತಿಂಗಳಿಗೆ ಶೈಕ್ಷಣಿಕ ಚಟುವಟಿಕೆಗಳನ್ನು ನಿಗಧಿಪಡಿಸಿಕೊಂಡಿರುವ ಹಿನ್ನೆಲೆಯಲ್ಲಿ ಸರ್ಕಾರದ ಆದೇಶ ಸಂಖ್ಯೆ:ಇಡಿ/171/ಡಿಸಿಇ/2023, ದಿನಾಂಕ: 31.10.2023 ರಲ್ಲಿ 2023-24 ನೇ ಶೈಕ್ಷಣಿಕ ಸಾಲಿಗೆ ಆಯ್ಕೆಗೊಳ್ಳುವ ಅತಿಥಿ ಉಪನ್ಯಾಸಕರನ್ನು ಸೆಮಿಸ್ಟರ್ ಬದಲಾಗಿ ಶೈಕ್ಷಣಿಕ ವರ್ಷಕ್ಕೆ(10 ತಿಂಗಳಿಗೆ ಮಾತ್ರ) ನೇಮಕ ಮಾಡಿಕೊಳ್ಳಲು ತಿಳಿಸಲಾಗಿದೆ. |
| ಈ) | ಯು.ಜಿ.ಸಿ ನಿಯಮಾವಳಿಯಂತೆ ಕನಿಷ್ಠ ವೇತನ ನೀಡದೆ ಇರಲು ಕಾರಣಗಳೇನು; | ಸರ್ಕಾರದ ಆದೇಶ ಸಂಖ್ಯೆ: ಇಡಿ 242 ಡಿಸಿಇ 2021, ದಿನಾಂಕ:14-11-2023 ಮತ್ತು 24-01-2022 ರಲ್ಲಿ ಅತಿಥಿ ಉಪನ್ಯಾಸಕರಿಗೆ ನೀಡಲಾಗುತ್ತಿದ್ದ ಗರಿಷ್ಠ 8/10 ಗಂಟೆಗಳ ಬದಲಾಗಿ , ಗರಿಷ್ಟ 15/19ಗಂಟೆಗಳ ಕಾರ್ಯಭಾರವನ್ನು ನೀಡಿ, ಈ ಹಿಂದೆ ನೀಡಲಾಗುತ್ತಿದ್ದ ರೂ. 11000/- ಮತ್ತು 13000/-ಗಳ ಗೌರವಧನವನ್ನು ಈ ಕೆಳಗಿನಂತೆ ಹೆಚ್ಚಿಸಲಾಗಿದೆ.<br><br>ಅ) 5 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ ರೂ.32,000/- (ಮೂವತ್ತೆರಡು ಸಾವಿರ ಮಾತ್ರ)<br><br>ಆ) 5 ವರ್ಷಕ್ಕಿಂತ ಕಡಿಮೆ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ ರೂ.30,000/- (ಮೂವತ್ತು ಸಾವಿರ ಮಾತ್ರ) |

| | | |
|---|---|---|
| | | ಇ) 5 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ ರೂ.28,000/- (ಇಪ್ಪತ್ತೆಂಟು ಸಾವಿರ ಮಾತ್ರ)<br><br>ಈ) 5 ವರ್ಷಕ್ಕಿಂತ ಕಡಿಮೆ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ ರೂ.26,000/- (ಇಪ್ಪತ್ತಾರು ಸಾವಿರ ಮಾತ್ರ) |
| ಉ) | ಯಾವ ಕಾಲಮಿತಿಯಲ್ಲಿ ಸೇವಾ ಭದ್ರತೆ, ರಜೆ ಸೌಲಭ್ಯ ಹಾಗೂ ಕನಿಷ್ಠ ವೇತನ ನೀಡಲಾಗುವುದು? (ವಿವರ ನೀಡುವುದು) | ಖಾಯಂ ಪ್ರಾಧ್ಯಾಪಕರುಗಳಿಗೆ ನೀಡುವ ಪಿಂಚಣಿ, ಗ್ರ್ಯಾಚುಟಿ, ರಜೆ ಹಾಗೂ ಇನ್ನಿತರ ಸೌಲಭ್ಯಗಳನ್ನು ಅತಿಥಿ ಉಪನ್ಯಾಸಕರಿಗೆ ನೀಡಲು ನಿಯಮಗಳಲ್ಲಿ ಅವಕಾಶ ಇರುವುದಿಲ್ಲ. |

ಇಡಿ 318 ಡಿಸಿಇ 2023 (ಇ)

**(ಡಾ: ಎಂ.ಸಿ. ಸುಧಾಕರ್)**
ಉನ್ನತ ಶಿಕ್ಷಣ ಸಚಿವರು

**ಕರ್ನಾಟಕ ವಿಧಾನ ಪರಿಷತ್ತು**